ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ಲೋಕೋಪಯೋಗಿ ಇಲಾಖೆಗೆ ನೀಡಿರುವ ಅನುದಾನದ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

602 (612) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿವಿಧ ಲೆಕ್ಕ ಶೀರ್ಷಿಕೆಯಡಿಯಲ್ಲಿ ಲೋಕೋಪಯೋಗಿ ಇಲಾಖೆಗೆ 2019-20ರ ಆಯವಯ್ಯದಲ್ಲಿ ಒದಗಿಸಿರುವ ಅನುದಾನವೆಷ್ಟು; (ಜಿಲ್ಲಾವಾರು ಹಂಚಿಕೆ ಮಾಡಿರುವ ಬಗ್ಗೆ ಮಾಹಿತಿ ನೀಡುವುದು)

(ಆ) ಸದರಿ ಅನುದಾನದಲ್ಲಿ ತುಮಕೂರು ಜಿಲ್ಲೆಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಮತ್ತು ರಸ್ತೆಗಳನ್ನು ನಿರ್ಮಿಸಲಾಗಿದೆ ; (ಕಾಮಗಾರಿಗಳ ವಿವರವನ್ನು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ನೀಡಿದ್ದ ಅನುದಾನವನ್ನು ಬಳಸಿಕೊಂಡು ಕಟ್ಟಡ ಕಾಮಗಾರಿಗಳು ಇತರೆ ಕಾಮಗಾರಿಗಳು ರಸ್ತೆ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆಯೇ ; ಪೂರ್ಣಗೊಳಿಸದಿದ್ದಲ್ಲಿ, ಯಾವಾಗ ಪೂರ್ಣಗೊಳಿಸಲಾಗುವುದು ; (ವಿವರ ನೀಡುವುದು)

(ಈ) ತುಮಕೂರು ಜಿಲ್ಲೆಗೆ ವಿವಿಧ ಲೆಕ್ಕ ಶೀರ್ಷಿಕೆಯಡಿ ನೀಡಿದ್ದ ಅನುದಾನದಲ್ಲಿ 2019-20ರ ಮಾರ್ಚ್ ಅಂತ್ಯಕ್ಕೆ ಉಳಿಕೆಯಾಗಿರುವ ಹಣವೆಷ್ಟು ? (ಪೂರ್ಣ ಮಾಹಿತಿ ಒದಗಿಸುವುದು)